# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 590 |
| ಸದಸ್ಯರ ಹೆಸರು | : | ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭಾ ಕ್ಷೇತ್ರ ) |
| ಉತ್ತರಿಸಬೇಕಾದ ದಿನಾಂಕ | : | 09.03.2026 |
| ಉತ್ತರಿಸಬೇಕಾದ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| 1 | ಕಲಬುರಗಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶದ ಕುರಿತು ತಯಾರಿ ಯಾವ ಹಂತದಲ್ಲಿ ಇದೆ: (ಸಂಪೂರ್ಣ ಮಾಹಿತಿ ನೀಡುವುದು); | ಪ್ರತಿ ವಿದ್ಯಾರ್ಥಿಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತೇರ್ಗಡೆಯಾಗಲು ಸಮಾನ ಅವಕಾಶ ಕಲ್ಪಿಸಿ, ಪರೀಕ್ಷೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆ ಕಾಪಾಡಿಕೊಳ್ಳಲು, ರಾಜ್ಯದ ಮಾನವ ಸಂಪನ್ಮೂಲ ಅಭಿವೃದ್ಧಿಗಾಗಿ ಹಾಗೂ ರಾಜ್ಯದ ಸರ್ವಾಂಗೀಣ ಪ್ರಗತಿಯ ದೃಷ್ಠಿಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯು ಅತಿಸೂಕ್ಷ್ಮ ಬುನಾದಿಯಾಗಿರುತ್ತದೆ. ಈ ಹಿನ್ನಲೆಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗಾಗಿ ಕೆಳಕಂಡಂತೆ ಕ್ರಮವಹಿಸಲಾಗುತ್ತಿದೆ:-<br>1. 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಫಲಿತಾಂಶ ವೃದ್ಧಿಗಾಗಿ ಸರ್ಕಾರದಿಂದ ದಿನಾಂಕ:01.07.2025ರಂದು 29 ಕಾರ್ಯಕ್ರಮಗಳ /ಅಂಶಗಳ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. ಅದರಂತೆ ಜಿಲ್ಲಾ ಮತ್ತು ತಾಲ್ಲೂಕು ಹಂತದಲ್ಲಿ ಕ್ರಮವಹಿಸಲಾಗುತ್ತಿದೆ.<br>2. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣತಾ ಮಟ್ಟವನ್ನು ಹೆಚ್ಚಿಸಲು ವಿಷಯವಾರು ಸಂಪನ್ಮೂಲ ವ್ಯಕ್ತಿಗಳನ್ನು ಒಂದು ದಿನಕ್ಕೆ 2-3 ಜಿಲ್ಲೆಗಳಂತೆ ವಿಭಾಗವಾರು ಒಂದು ಕಡೆ ಸೇರಿಸಿ, ವಿವಿಧ ದಿನಾಂಕಗಳಂದು ತರಬೇತಿಯನ್ನು ನೀಡಲಾಗಿರುತ್ತದೆ. ಸದರಿ ಸಂಪನ್ಮೂಲ ವ್ಯಕ್ತಿಗಳಿಂದ ತಾಲ್ಲೂಕುವಾರು ಶಿಕ್ಷಕರಿಗೆ ತರಬೇತಿಯನ್ನು ನೀಡಲಾಗುತ್ತಿದೆ.<br>3. ಮಿಷನ್ 40+ ಜಾರಿಗೊಳಿಸಿ ಕಡಿಮೆ ಫಲಿತಾಂಶ ಬಂದ ಶಾಲೆಗಳಿಗೆ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಪ್ರಗತಿ ವರದಿಯನ್ನು ಪ್ರತಿವಾರ ಸಲ್ಲಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲಾಗಿದೆ.<br>4. 14 ನವೆಂಬರ್ 2025ರಂದು ರಾಜ್ಯಾದ್ಯಂತ ಮಹಾ ಪೋಷಕರ ಸಭೆಯನ್ನು ಎಲ್ಲಾ ಶಾಲೆಗಳಲ್ಲಿ ನಡೆಸಲಾಯಿತು. ಈ ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಉತ್ತಮ ಪಡಿಸುವ ಬಗ್ಗೆ ಪೋಷಕರ ಜವಾಬ್ದಾರಿಯನ್ನು ಮನವರಿಕೆ ಮಾಡಲಾಯಿತು. ಸದರಿ ಸಭೆಯಲ್ಲಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯಿಂದ ಮಾಡಿರುವ ವಿದ್ಯಾರ್ಥಿ ಅಂಕಣದ ಬಗ್ಗೆ ಪರಿಚಯ ನೀಡಲಾಯಿತು.<br>5. ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯ ಜಾಲತಾಣದ ಮುಖಪುಟದಲ್ಲಿ ವಿದ್ಯಾರ್ಥಿ ಅಂಕಣ (Student Corner) ವಿನ್ಯಾಸಗೊಳಿಸಿ, ವಿದ್ಯಾರ್ಥಿಗಳ ಪರೀಕ್ಷಾ ತಯಾರಿಗೆ ಅನುಕೂಲವಾಗುವ ಪರೀಕ್ಷಾ ಅಧ್ಯಯನ ವಿಷಯಗಳನ್ನು ಇಂಡೀಕರಿಸಲಾಗಿದೆ. ಪರೀಕ್ಷೆ-1, 2, 3 ರ ವೇಳಾಪಟ್ಟಿಯನ್ನು ಮೊದಲೇ ಪೂರೈಸಲಾಗಿದೆ. ಹಾಗೆಯೇ ಮೂರು ಪೂರ್ವ ಸಿದ್ವತಾ ಪರೀಕ್ಷೆಯ ವೇಳಾಪಟ್ಟಿಯನ್ನು ಸಹ ಪ್ರಕಟಿಸಲಾಗಿದೆ. |

6. ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ ಜಾಲತಾಣದ ಮುಖಪುಟದಲ್ಲಿ ವಿದ್ಯಾರ್ಥಿ ಅಂಕಣ (Student Corner) ವಿನ್ಯಾಸಗೊಳಿಸಿ, ವಿದ್ಯಾರ್ಥಿಗಳ ಪರೀಕ್ಷಾ ತಯಾರಿಗೆ ಅನುಕೂಲವಾಗುವ ಪರೀಕ್ಷಾ ಅಧ್ಯಯನ ವಿಷಯಗಳನ್ನು ಇಂಡೀಕರಿಸಲಾಗಿದೆ.

7. ಈಗಾಗಲೇ ವಿದ್ಯಾರ್ಥಿಗಳ ಪರೀಕ್ಷಾ ತಯಾರಿಗೆ ಅನುಕೂಲವಾಗುವಂತೆ ವಿಷಯವಾರು ನೀಲ ನಕ್ಷೆ(Blue Print) ರಚಿಸಿ, ಅದರನ್ವಯ ಮಾದರಿ ಪ್ರಶ್ನೆಪತ್ರಿಕೆಗಳನ್ನು (Model Question Papers) ತಯಾರಿಸಿ, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ ಜಾಲತಾಣದಲ್ಲಿ ಪ್ರಕಟಿಸಲಾಗಿದೆ. ವಿದ್ಯಾರ್ಥಿಗಳು ಸದರಿ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಅಭ್ಯಸಿಸಿ, ಫಲಿತಾಂಶ ಉತ್ತಮಪಡಿಸಿಕೊಳ್ಳಲು ಸಹಕಾರಿಯಾಗಿದೆ.

8. ಎಲ್ಲಾ ವಿಷಯಗಳ ಸಮಗ್ರ ಪ್ರಶ್ನೆ ಕೋಠಿಗಳನ್ನು (Exhaustive Question Bank) ಸಂಬಂಧಪಟ್ಟ ವಿಷಯ ತಜ್ಞರಿಂದ ರಚಿಸಲಾಗಿದೆ. ಪ್ರಶ್ನೆ ಕೋಠಿಯಲ್ಲಿ ಅಧ್ಯಾಯವಾರು ವಿವಿಧ ಅಂಕಗಳ ಪ್ರಶ್ನೆಗಳನ್ನು ಸುಲಭ/ಸಾಧಾರಣ/ಕಠಿಣ ಎಂದು ವರ್ಗೀಕರಿಸಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ ಜಾಲತಾಣದಲ್ಲಿ ಪ್ರಕಟಿಸಲಾಗಿದೆ.

9. ನೀಲ ನಕ್ಷೆ, ಮಾದರಿ ಪ್ರಶ್ನೆ ಪತ್ರಿಕೆಗಳು ಹಾಗೂ ಪ್ರಶ್ನೆ ಕೋಠಿಗಳನ್ನು ಬಳಸಿಕೊಂಡು ಮುಂಬರುವ ಪರೀಕ್ಷೆಗಳಿಗೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸುವ ಕುರಿತಂತೆ ಶಿಕ್ಷಕರಿಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ ಹಾಗೂ DSERT ಸಹಯೋಗದೊಂದಿಗೆ ಜಿಲ್ಲಾವಾರು, ವಿಷಯವಾರು ಪುನಶ್ಚೇತನ ತರಬೇತಿ ಶಿಬಿರಗಳನ್ನು ನಡೆಸಲಾಗಿದೆ.

10. ಫಲಿತಾಂಶ ಸುಧಾರಣೆಗಾಗಿ ಕೈಗೊಳ್ಳಬೇಕಾದ ಕ್ರಮಗಳನ್ನು ಕುರಿತಂತೆ ರಾಜ್ಯದ ಎಲ್ಲಾ ಶಿಕ್ಷಕರಿಗೆ ಸಂಪನ್ಮೂಲವ್ಯಕ್ತಿಗಳಿಂದ ONLINE ಕಾರ್ಯಾಗಾರವನ್ನು ನಡೆಸಲಾಗಿದೆ ಹಾಗೂ ಸದರಿ ವಿಡಿಯೋಗಳನ್ನು ವಿದ್ಯಾರ್ಥಿಗಳು ಹಾಗೂ ಶಿಕ್ಷಕರ ವೀಕ್ಷಣೆಗಾಗಿ YOUTUBE ನಲ್ಲಿ ಲಭ್ಯಗೊಳಿಸಲಾಗಿದೆ.

11. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ ಮೂರು ಪೂರ್ವಸಿದ್ಧತಾ ಪರೀಕ್ಷೆಗಳನ್ನು ಜನವರಿ-2026ರ ಮಾಹೆಯಿಂದ ನಡೆಸಲಾಗಿರುತ್ತದೆ.

12. ಜನವರಿ-2026ರ ಅಂತ್ಯದೊಳಗೆ ಪಠ್ಯಕ್ರಮ ಬೋಧನೆಯನ್ನು ಪೂರ್ಣಗೊಳಿಸಿ, ಫೆಬ್ರುವರಿ-2026 ರಿಂದ ಪುನರಾವರ್ತನೆ ಹಾಗೂ ಪೂರ್ವಸಿದ್ಧತಾ ಪರೀಕ್ಷೆಗಳನ್ನು ನಡೆಸಲಾಗಿದೆ.

13. ಫಲಿತಾಂಶ ಸುಧಾರಣಾ ಕ್ರಮಗಳ ಅನುಷ್ಠಾನ ಕುರಿತಂತೆ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಜವಾಬ್ದಾರಿ ನೀಡಿ, ನಿರಂತರ ಅನುಪಾಲನೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.

14. ಎಸ್.ಎಸ್.ಎಲ್.ಸಿ. ಪರೀಕ್ಷೆಗಳಲ್ಲಿ ಕನಿಷ್ಠ ಉತ್ತೀರ್ಣತಾ ಪ್ರಮಾಣವನ್ನು ಶೇ.35 ರಿಂದ ಶೇ.33 ಕ್ಕೆಮಾರ್ಪಡಿಸಿ, 2025-26ನೇ ಸಾಲಿನ ಹಾಗೂ ಮುಂಬರುವ ಪರೀಕ್ಷೆಗಳಿಗೆ ಅನ್ವಯವಾಗುವಂತೆ ಘೋಷಿಸಲಾಗಿದೆ. ಇದರಿಂದ ಉತ್ತೀರ್ಣತಾ ಪ್ರಮಾಣ ಹೆಚ್ಚಳವಾಗಿ ಉನ್ನತ ಶಿಕ್ಷಣ

| | | |
|---|---|---|
| | | ಪಡೆಯುವ ವಿದ್ಯಾರ್ಥಿಗಳ ಪ್ರಮಾಣ ಅಧಿಕವಾಗುತ್ತದೆ. ವಿದ್ಯಾರ್ಥಿಗಳು ಶೈಕ್ಷಣಿಕ ಹಾಗೂ ಸಾಮಾಜಿಕ ಮುಖ್ಯವಾಹಿನಿಯಲ್ಲಿ ಮುಂದುವರೆಯಲು ಸಹ ಇದು ಸಹಕಾರಿಯಾಗಲಿದೆ.<br>15. ಶಾಲೆಯ ಶಿಕ್ಷಕರಿಗೆ ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ದತ್ತು ನೀಡಲಾಗಿದೆ ಹಾಗೂ ಆಯ್ದ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಪಾಠ ಅಭ್ಯಾಸ, ಪುನರಾವರ್ತನೆಗಳನ್ನು ನಡೆಸಲಾಗುತ್ತಿದೆ.<br>16. ಸರ್ಕಾರದ ಆದೇಶ ಸಂಖ್ಯೆ:ಇಪಿ 285 ಯೋಸಕ 2025, ದಿನಾಂಕ:16.12.2025ರಲ್ಲಿ ಕಲ್ಯಾಣ ಕರ್ನಾಟಕ ಭಾಗದ 2025-26ನೇ ಸಾಲಿನ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆಗಾಗಿ, ಕಲಬುರಗಿ ವಿಭಾಗದ 1345 ಸರ್ಕಾರಿ ಪ್ರೌಢಶಾಲೆಗಳಲ್ಲಿ "ಪರಿಹಾರ ಭೋಧನೆ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಆದೇಶಿಸಲಾಗಿದೆ ಹಾಗೂ ಶಾಲಾ ಅವಧಿ ಪೂರ್ವ ಮತ್ತು ಅವಧಿಯ ನಂತರ ಪರಿಹಾರ ಭೋಧನೆ ಕಾರ್ಯಕ್ರಮದಲ್ಲಿ ತೊಡಗಿಸಿಕೊಳ್ಳುವ ಶಿಕ್ಷಕರಿಗೆ ಪ್ರತಿ ತಿಂಗಳು ರೂ.1000/-ರಂತೆ ಪ್ರೋತ್ಸಾಹ ಧನವನ್ನು ಶಿಕ್ಷಕರ ಬ್ಯಾಂಕ್ ಖಾತೆಗೆ ವರ್ಗಾವಣೆಗೊಳಿಸಲಾಗುತ್ತಿದೆ.<br><br>ಮುಂದುವರೆದು, ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತವಾಗಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>• ಸಮವಸ್ತ್ರ.<br>• ಶೂ-ಸಾಕ್ಸ್.<br>• ಪಠ್ಯ ಪುಸ್ತಕ.<br>ಮಧ್ಯಾಹ್ನ ಉಪಹಾರ, ಪೂರಕ ಪೌಷ್ಟಿಕಾಂಶಯುಕ್ತ ಆಹಾರಗಳಾದ ಹಾಲು ಮತ್ತು ಮೊಟ್ಟೆ /ಬಾಳೆಹಣ್ಣುಗಳನ್ನು ವಿತರಿಸಲಾಗುತ್ತಿದೆ. |
| 2 | 10ನೇ ತರಗತಿ ಮಕ್ಕಳಿಗೆ ಶಿಕ್ಷಕರಿಂದ ತಯಾರಿ ರೂಪದಲ್ಲಿ ಮಾದರಿ ಪ್ರಶ್ನೆ ಪತ್ರಿಕೆಯಲ್ಲಿ (ಹಿಂದೆ ನಡೆದ ಪ್ರಶ್ನೆ ಪತ್ರಿಕೆ)ತಯಾರಿ ಮಾಡಿಸಲಾಗುತ್ತಿದಿಯೇ; | ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯಿಂದ 04 ಮಾದರಿ ಪ್ರಶ್ನೆ ಪತ್ರಿಕೆಗಳು ಮತ್ತು ಮಾದರಿ ಉತ್ತರ ಸಹಿತ ಪುನರ್ ಮನನ ಕಾರ್ಯ ನಡೆಸಲಾಗುತ್ತಿದೆ. |
| 3 | ಕಲಬುರಗಿ ಜಿಲ್ಲೆಯಲ್ಲಿ ಸರ್ಕಾರಿ ಆಂಗ್ಲ ಮಾಧ್ಯಮ ಶಾಲೆಗಳು ಎಷ್ಟು: ಮತ್ತು ಮಕ್ಕಳಿಗೆ, ಪೋಷಕರಿಗೆ ಮನವೊಲಿಸಿ ಆಂಗ್ಲ ಮಾಧ್ಯಮಕ್ಕೆ ಕರೆತರಲು ಯಾವ ನಿರ್ಣಯ ಕೈಗೊಳ್ಳಲಾಗಿದೆ; | ಕಲಬುರಗಿ ಜಿಲ್ಲೆಯಲ್ಲಿ 07 ಆದರ್ಶ ವಿದ್ಯಾಲಯ ಶಾಲೆಗಳು, 14 ಕರ್ನಾಟಕ ಪಬ್ಲಿಕ್ ಶಾಲೆಗಳು ಮತ್ತು 165 ದ್ವಿ ಭಾಷಾ ಶಾಲೆಗಳು ಸೇರಿದಂತೆ ಒಟ್ಟು 186 ಆಂಗ್ಲ ಮಾಧ್ಯಮ ಶಾಲೆಗಳಿರುತ್ತವೆ. ಆಂಗ್ಲ ಮಾಧ್ಯಮ ಶಾಲೆಗಳಿಗೆ ಪ್ರವೇಶ ಪಡೆಯಲು ನವ್ಹೆಂಬರ್-14 ರಿಂದ ದಾಖಲಾತಿ ಆಂದೋಲನವನ್ನು ಪ್ರಾರಂಭಿಸಲಾಗಿದೆ. |
| 4 | ಮುಂಬರುವ ದಿನಗಳಲ್ಲಿ ಸರ್ಕಾರದಿಂದ ಆಂಗ್ಲ ಮಾಧ್ಯಮವನ್ನು ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ? (ಜಿಲ್ಲಾವಾರು ಮಾಹಿತಿ ನೀಡುವುದು) | ಸರ್ಕಾರಿ ಆಂಗ್ಲ ಮಾಧ್ಯಮ ಶಾಲೆಗಳನ್ನು ಹೆಚ್ಚಿಸುವ ಕುರಿತು ಸಂಬಂಧಿಸಿದ ಜಿಲ್ಲೆಗಳಿಂದ ಬೇಡಿಕೆ ಬಂದಲ್ಲಿ ನಿಯಮಾನುಸಾರ ಹಾಗೂ ಅರ್ಹತೆಯಂತೆ ಪರಿಶೀಲಿಸಲಾಗುವುದು. |

**ಸಂಖ್ಯೆ: ಇಪಿ 43 ಪಿಟಿಐ 2026**

**(ಎಸ್. ಮಧುಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ
ಸಚಿವರು